**ಸಾಕ್ಷಿಗೆ ದಿನಾಂಕಃ 07.04.2026 ರಂದು ಪ್ರಮಾಣ ಮಾಡಿಸಲಾಯಿತು.**

**ಪಾಟೀ ಸವಾಲು : ಶ್ರೀ. ಬಿ.ಎಂ.ಎಸ್. ವಕೀಲರಿಂದಃ**

ದಾವಾ ಸ್ವತ್ತಿನ ನಿವೇಶನದ ಸಂಖ್ಯೆ 26 ಆಗಿರುತ್ತದೆ. ದಾವಾ ಸ್ವತ್ತಿನ ದಕ್ಷಿಣಕ್ಕೆ ನಿವೇಶನದ ಸಂಖ್ಯೆ 25 ಇರುತ್ತದೆ. 4 ನೇ ಪ್ರತಿವಾದಿಯು ಖರೀದಿ ಮಾಡಿದ ನಿವೇಶನದ ಸಂಖ್ಯೆ 23 ಆಗಿರುತ್ತದೆ ಎಂದರೆ ನನಗೆ ಗೊತ್ತಿಲ್ಲ. ನಾನು ಸಿದ್ದರಾಜು ವಿರುದ್ಧ ದಾವೆ ಸಲ್ಲಿಸಿದ್ದು, ಸಲೀಂ ಮಹಮದ್ ವಿರುದ್ಧ ದಾವೆ ಸಲ್ಲಿಸಿರುವುದಿಲ್ಲ. ಸದರಿಯವರು ತಮ್ಮ ನಿವೇಶನದಲ್ಲಿ ಮನೆಯನ್ನು ನಿರ್ಮಿಸಿರುತ್ತಾರೆ ಎಂದರೆ ಸರಿಯಲ್ಲ. ಸದರಿಯವರು ತಮ್ಮ ನಿವೇಶನದ ಮೇಲೆ 5 ನೇ ಪ್ರತಿವಾದಿ ಬ್ಯಾಂಕಿನಲ್ಲಿ 2013 ರಲ್ಲಿ ಅಡಮಾನ ಇಟ್ಟು ಸಾಲ ಪಡೆದಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. 5 ನೇ ಪ್ರತಿವಾದಿಯು ದಾವಾ ಸ್ವತ್ತಿಗೆ ಬಂದು ನೋಟಿಸನ್ನು ಅಂಟಿಸಿದ ಕಾರಣ ಅವರನ್ನು ಪಕ್ಷಗಾರರನ್ನಾಗಿ ಮಾಡಿರುತ್ತೇನೆ. ದಾವಾ ಸ್ವತ್ತು ಮತ್ತು 4 ನೇ ಪ್ರತಿವಾದಿಯ ನಿವೇಶನ ಬೇರೆ ಬೇರೆ ಇರುತ್ತದೆ ಎಂದರೆ ಸರಿ. 4 ನೇ ಪ್ರತಿವಾದಿಯ 5 ನೇ ಪ್ರತಿವಾದಿಯ ಬ್ಯಾಂಕಿನಲ್ಲಿ ತನ್ನ ನಿವೇಶನವನ್ನು ಅಡಮಾನ ಇಟ್ಟು ಸಾಲ ಪಡೆದಿರುವುದು ಸರಿ ಇರುವುದಿಲ್ಲ. 4 ನೇ ಪ್ರತಿವಾದಿಯು ಹಣವನ್ನು ಪಾವತಿ ಮಾಡದ ಕಾರಣ 5 ನೇ ಪ್ರತಿವಾದಿ ಬ್ಯಾಂಕು ಹರಾಜು ಪ್ರಕ್ರಿಯೆಯನ್ನು ಮಾಡಿರುತ್ತಾರೆ ಎಂದರೆ ದಾವಾ ಸ್ವತ್ತಿಗೂ ಅವರಿಗೂ ಸಂಬಂಧ ಇರುವುದಿಲ್ಲ ಎಂದು ನುಡಿದಿರುತ್ತಾರೆ. ಹರಾಜು ಪ್ರಕ್ರಿಯೆಯನ್ನು 5 ನೇ ಪ್ರತಿವಾದಿ ಬ್ಯಾಂಕಿನ ಹೆಡ್ ಆಫೀಸ್ ನವರು ಮಾಡಿರುತ್ತಾರೆ ಎಂದರೆ ಸರಿಯಲ್ಲ. ಹೆಡ್ ಆಫೀಸ್ ನವರನ್ನು ಪಕ್ಷಗಾರರನ್ನಾಗಿ ಮಾಡಲು ತೊಂದರೆ ಇರುವುದಿಲ್ಲ.

ಅಸ್ತಿತ್ವದಲ್ಲಿ ಇಲ್ಲದೆ ಇರುವ ನಿವೇಶನವನ್ನು ಖರೀದಿ ಮಾಡಿ ಈ ಸುಳ್ಳು ದಾವೆಯನ್ನು ಪ್ರತಿವಾದಿಗಳ ವಿರುದ್ಧ ದಾಖಲು ಮಾಡಿರುತ್ತೇನೆ ಎಂದರೆ ಸರಿಯಲ್ಲ. ನಿ.ಪಿ.14 ರಿಂದ 16 ರ ದಾಖಲೆಗಳನ್ನು ಈ ಕೇಸಿಗಾಗಿ ಸೃಷ್ಟಿ ಮಾಡಿರುತ್ತೇವೆ ಎಂದರೆ ಸರಿಯಲ್ಲ. ದಾವಾಸ್ವತ್ತು ನನಗೆ ಸೇರಿಲ್ಲದೆ ಇದ್ದರೂ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಮರು ವಿಚಾರಣೆ ಇರುವುದಿಲ್ಲ.**

**(ನನ್ನ ಉಕ್ತ ಲೇಖನಕ್ಕೆ ಬೆರಳಚ್ಚು ಮಾಡಲಾಯಿತು)**

**ಓ ಹೇ ಕೇ ಸ ಇ ಒ.**

**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು**

**ಮತ್ತು ಪ್ರ.ದ.ನ್ಯಾದಂ. ತಿ.ನರಸೀಪುರ.**